**3** ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ

**C.C. No.1145/2025**

**CW- 2** **PW:2**

| | | |
|---|---|---|
| ಸಾಕ್ಷಿಯ ಹೆಸರು | ಃ | ಅಣ್ಣಪ್ಪ ಕರಿಯಮ್ಮನವರ |
| ತಂದೆ /ಗಂಡನ ಹೆಸರು | ಃ | ನಿಂಗಪ್ಪ |
| ವಯಸ್ಸು | ಃ | 31 ವರ್ಷ |
| ಉದ್ಯೋಗ | ಃ | ಕೂಲಿ ಕೆಲಸ |
| ವಾಸಸ್ಥಳ | ಃ | ರಾಣೆಬೆನ್ನೂರ. |

ದಿಃ **16.07.2026.** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನನಗೆ ತೋರಿದ ದಾಖಲೆಯಲ್ಲಿ ನನ್ನ ಸಹಿ ಇದ್ದು ಅದನ್ನು ನೋಡಿ ಗುರುತಿಸುತ್ತಿದ್ದು ಸದರಿ ದಾಖಲಾತಿಯನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು, ನನ್ನ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ನಿಪಿ.2 ನ್ನು ಯಾವ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಮಾಡಿದ್ದಾರೆ ಹಾಗೂ ನಾನು ಸಹಿ ಮಾಡಿದ್ದೇನೆ ಎನ್ನುವುದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವದೇ ವಸ್ತುಗಳನ್ನು ಜಪ್ತಿ ಮಾಡಿಕೊಂಡಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ಎಲ್ಲಿಯೂ ನೋಡಿರುವುದಿಲಲ. ನಿಪಿ.2 ಕ್ಕೆ ನನ್ನ ಜೊತೆ ಯಾರು ಸಹಿ ಮಾಡಿರುತ್ತಾರೆ ಎನ್ನುವುದು ಗೊತ್ತಿಲ್ಲ. ನಿಪಿ.2 ಕ್ಕೆ ಸ್ಥಳವನ್ನು ಯಾರು ತೋರಿಸಿದರು ಎನ್ನುವುದು ನನಗೆ ಗೊತ್ತಿಲ್ಲ. ಸಾಕ್ಷಿ ಪೊಟೊವನ್ನು ನೋಡಿ ಗುರುತಿಸುತ್ತಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿರುತ್ತದೆ. ನಿಪಿ.3 ನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎನ್ನುವುದು ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟಿಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ದಿಃ 14.06.2025 ರಂದು ನವನಗರ ಠಾಣಾ ಪೊಲಿಸನವರು ನನ್ನ ಮತ್ತು ಚಾಸಾಃ 3 ರವರ ಸಮಕ್ಷಮ ಮದ್ಯಾಹ್ನ 3.25 ರಿಂದ 4.30 ಗಂಟೆಯವರೆಗೆ ನಿಪಿ.2 ರಲ್ಲಿ ಗಾಮನಗಟ್ಟಿ ಕೈಗಾರಿಕಾ ಪ್ರದೇಶದಲ್ಲಿರುವ ಚೋಟಾ ಧಾಬಾ ಹೊಟೆಲ ಮುಂದಗಡೆ ಇರುವ ಸಾರ್ವಜನಿಕ ರಸ್ತೆಯಲ್ಲಿ ಪಂಚನಾಮೆ ಮಾಡಿ ನಾಯಾಲಯದ ಮುಂದೆ ಇರುವ ಮು ಮಾ 1 ಮತ್ತು 2 ನ್ನು ಜಪ್ತು ಮಾಡಿದ ಪಂಚನಾಮೆಗೆ ನಿಪಿ.2(ಬಿ) ದಂತೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ.2 ರ ಕಾಲಕ್ಕೆ ನನ್ನ ಜೊತೆ ಚಾಸಾಃ 3 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.2 ರ ಸ್ಥಳವನ್ನು ಚಾಸಾಃ 1 ರವರು ತೊರಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.3 ಪೊಟೊವನ್ನು ನಿಪಿ.2 ರ ಕಾಲಕ್ಕೆ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.2 ಮತ್ತು 3 ರಲ್ಲಿರುವ ಎಲ್ಲ ವಿಷಯಗಳು ಗೊತ್ತಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟಿಸವಾಲುಃ ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)
ಓ ಹೇ ಕೆ ಸರಿ ಇದೆ.

**(ಶ್ರೀ ರಮೇಶ ಎಸ್ ಗಾಣಿಗೇರ)**
**3** ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.